ಇ) ಈ ಪರೀಕ್ಷೆಗಳಲ್ಲಿ ಅವ್ಯವಹಾರಗಳು ನಡೆಯುತ್ತಿರುವುದು ನಿಜವಲ್ಲವೇ?

ಈ) ಏಳನೇ ತರಗತಿಯ ಪಬ್ಲಿಕ್ ಪರೀಕ್ಷೆಯನ್ನು ರದ್ದುಗೊಳಿಸಿ, ಆಯಾ ಶಾಲೆಗಳಲ್ಲಿಯೇ ಈ ಪರೀಕ್ಷೆಯನ್ನು ನಡೆಸಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೆ?

ಶ್ರೀ ಹೆಚ್.ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು):

ಅ) 8,17,032

ಆ) ಏಳನೇ ತರಗತಿ ಪರೀಕ್ಷೆಯಲ್ಲಿ ಬೆಂಗಳೂರು ಉತ್ತರ ಜಿಲ್ಲೆಯಲ್ಲಿ ಸಮಾಜ ವಿಜ್ಞಾನ ಪ್ರಶ್ನೆ ಪತ್ರಿಕೆ ಬಹಿರಂಗವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು ಈ ವಿಷಯಕ್ಕೆ ಮರು ಪರೀಕ್ಷೆ ದಿನಾಂಕ:16-04-2001ರಂದು ನಡೆಸಲಾಗಿದೆ.

ಇ ಮತ್ತು ಈ) ಇಲ್ಲ.

ಕೊಪ್ಪಳ ಜಿಲ್ಲಾ ಆಸ್ಪತ್ರೆಗೆ ಸ್ವಂತ ಕಟ್ಟಡ ನಿರ್ಮಾಣ.

1825(2048)

ಶ್ರೀ ಕರಡಿ ಸಂಗಣ್ಣ ಅಮರಪ್ಪ(ಕೊಪ್ಪಳ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ರಾಜ್ಯದಲ್ಲಿ ವಿಶ್ವ ಬ್ಯಾಂಕ್ ನೆರವಿನಿಂದ ಆರೋಗ್ಯ ಅಭಿವೃದ್ಧಿ ಯೋಜನೆಯಡಿಯಲ್ಲಿ ಆಸ್ಪತ್ರೆ ಕಟ್ಟಡಗಳ ನಿರ್ಮಾಣ ಕಾರ್ಯ ಕೈಗೊಳ್ಳಲಾಗಿದೆಯೇ? ಹಾಗಿದ್ದಲ್ಲಿ ಅದು ಯಾವ ಹಂತದಲ್ಲಿದೆ? ಯಾವಾಗ ಪೂರ್ಣಗೊಳಿಸಲಾಗುವುದು?

ಆ. ಯಾವ ಯೋಜನೆಯಡಿ ಕೊಪ್ಪಳ ಜಿಲ್ಲಾ ಆಸ್ಪತ್ರೆಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಉದ್ದೇಶಿಸಲಾಗಿದೆ?

ಇ. ಹೊಸದಾಗಿ ರಚಿತ ಕೊಪ್ಪಳ ಜಿಲ್ಲಾ ಆಸ್ಪತ್ರೆಗೆ ಸ್ವಂತ ಸುಸಜ್ಜಿತ ಕಟ್ಟಡದ ಅವಶ್ಯಕತೆಯನ್ನು ಸರ್ಕಾರ ಮನಗೊಂಡಿದೆಯೆ? ಹಾಗಿದ್ದಲ್ಲಿ ಸದರಿ ಆಸ್ಪತ್ರೆಗೆ ಯಾವಾಗ ಕಟ್ಟಡ ನಿರ್ಮಾಣ ಕೈಗೊಳ್ಳಲಾಗುವುದು? ಯಾವಾಗ ಪೂರ್ಣಗೊಳಿಸಲಾಗುವುದು?

ಡಾ॥ ಎ.ಬಿ.ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ. ವಿಶ್ವ ಬ್ಯಾಂಕ್ ನೆರವಿನ ಕರ್ನಾಟಕ ಆರೋಗ್ಯ ವ್ಯವಸ್ಥೆಗಳ ಅಭಿವೃದ್ಧಿ ಯೋಜನೆಯಡಿಯಲ್ಲಿ ರಾಜ್ಯದ ಬೆಂಗಳೂರು, ಮೈಸೂರು ಮತ್ತು ಬೆಳಗಾಂ ಕಂದಾಯ ವಿಭಾಗಗಳಲ್ಲಿಯ 200 ಹಾಗೂ ಗುಲ್ಬರ್ಗ ವಿಭಾಗದಲ್ಲಿಯ 4 ದ್ವಿತೀಯ ಹಂತದ ಆಸ್ಪತ್ರೆಗಳ ನವೀಕರಣ ಹಾಗೂ ವಿಸ್ತರಣೆ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆ. ಈಗಾಗಲೇ 140 ಆಸ್ಪತ್ರೆ ಕಾಮಗಾರಿಗಳು ಪೂರ್ಣಗೊಂಡಿದ್ದು ಬಾಕಿ ಉಳಿದಿರುವ ಆಸ್ಪತ್ರೆ ಕಾಮಗಾರಿಗಳನ್ನು ಯೋಜನಾ ಅವಧಿಯೊಳಗೆ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ.

ಆ. ಜರ್ಮನ್ ನೆರವಿನ ಕೆಎಫ್‌ಡಬ್ಲ್ಯೂ ಯೋಜನೆಯ 2ನೆಯ ಹಂತದಲ್ಲಿ ಕೊಪ್ಪಳದ ಸಾರ್ವಜನಿಕ ಆಸ್ಪತ್ರೆಯನ್ನು ಜಿಲ್ಲಾ ಆಸ್ಪತ್ರೆಯಾಗಿ ಮೇಲ್ದರ್ಜೆಗೇರಿಸಲು ಉದ್ದೇಶಿಸಲಾಗಿದೆ.

ಇ. ಹೌದು. ಮೇಲೆ ತಿಳಿಸಿರುವಂತೆ ಹಾಲಿ ಇರುವ ಸಾರ್ವಜನಿಕ ಆಸ್ಪತ್ರೆಯನ್ನು ಜಿಲ್ಲಾ ಆಸ್ಪತ್ರೆಯಾಗಿ ಅಭಿವೃದ್ಧಿಪಡಿಸಲು ಉದ್ದೇಶಿಸಿದ್ದು ಆಗಸ್ಟ್ 2001ರಂದು ಬೆಂಗಳೂರಿಗೆ ಬರುವ ಕೆಎಫ್‌ಡಬ್ಲ್ಯೂ ಸಲಹೆಗಾರರೊಂದಿಗೆ (ಸಮಾಲೋಚಕರು) ಈ ಬಗ್ಗೆ ವಿವರವಾಗಿ ಚರ್ಚಿಸಿ ಮುಂದಿನ ಕ್ರಮಕೈಗೊಳ್ಳಲಾಗುವುದು.

ಖಾಸಗಿ ವೈದ್ಯಕೀಯ ಕಾಲೇಜುಗಳಿಗೆ ಪ್ರಾಥಮಿಕ ಆರೋಗ್ಯ ಕೇಂದ್ರಗಳ ನಿರ್ವಹಣೆಯನ್ನು ವಹಿಸಿಕೊಡುವುದು.

1827(1811)

ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ(ಬೈಲಹೊಂಗಲ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಖಾಸಗಿ ವೈದ್ಯಕೀಯ ಕಾಲೇಜುಗಳಿಗೆ ಪ್ರಾಥಮಿಕ ಆರೋಗ್ಯ ಕೇಂದ್ರಗಳ ನಿರ್ವಹಣೆಯನ್ನು ವಹಿಸಿಕೊಡಲಾಗುವುದೆಂಬ ಸಂಗತಿ ನಿಜವೇ?

ಆ) ಹಾಗಿದ್ದಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಖಾಸಗಿ ವೈದ್ಯಕೀಯ ಕಾಲೇಜುಗಳಿಗೆ ವಹಿಸಿಕೊಡಬೇಕೆಂದು ಸರ್ಕಾರ ತೀರ್ಮಾನಿಸಿದೆ?

ಇ) ಪ್ರತಿಯೊಂದು ವೈದ್ಯಕೀಯ ಕಾಲೇಜುಗಳಿಗೆ ಯಾವ ಯಾವ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ವಹಿಸಿಕೊಡಬೇಕೆಂದು ಸರ್ಕಾರ ತೀರ್ಮಾನಿಸಿದೆ? (ವಿವರ